ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 325
2. ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 17-02-2022.
4. ಉತ್ತರಿಸುವವರು : ಮುಖ್ಯಮಂತ್ರಿಯವರು

ಕ್ರಸಂ	ಪ್ರಶ್ನೆ	ಉತ್ತರ
ಅ	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಪುನರ್ ವಿಂಗಡಣೆ ಪ್ರಕ್ರಿಯೆಗೆ ಸರ್ಕಾರ ಆದೇಶಿಸಿದೆಯೇ ಹಾಗೂ ಸಮಿತಿಗೆ ವರದಿ ನೀಡಲು ಕಾಲಾವಕಾಶ ನೀಡಲಾಗಿದೆಯೇ; (ವಿವರ ನೀಡುವುದು)	ಹೌದು. ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 17 ಬಿಬಿಎಲ್ 2020 (ಭಾ-1)(ಇ), ದಿನಾಂಕ: 14-10-2020ರಲ್ಲಿ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 (1977 ರ ಕರ್ನಾಟಕ ಅಧಿನಿಯಮ 14)ರ 7ನೇ ಪ್ರಕರಣದ (1)ನೇ ಉಪಪ್ರಕರಣದ ಖಂಡ(ಎ)ರ ಪರಂತುದನ್ವಯ ಅಧಿಕಾರವನ್ನು ಚಲಾಯಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೌನ್ಸಿಲರ್‌ಗಳ ಸಂಖ್ಯೆಯನ್ನು 243 (ಇನ್ನೂರ ನಲವತ್ತ ಮೂರು) ಎಂದು ನಿಗದಿಪಡಿಸಲಾಗಿದೆ. ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 17 ಬಿಬಿಎಲ್ 2020(ಭಾಗ-1)(ಇ), ದಿನಾಂಕ: 14-10-2020ರಲ್ಲಿ ಕೆ.ಎಂ.ಸಿ. ಕಾಯ್ದೆ, 1976ರ(1977ರ ಕರ್ನಾಟಕ ಅಧಿನಿಯಮ, 14)ರ 21ನೇ ಪ್ರಕರಣದ (2)(ಎ) ಉಪ ಪ್ರಕರಣದನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪ್ರದೇಶಕ್ಕೆ ಸಂಬಂಧಿಸಿದಂತೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಲು 06 (ಆರು) ತಿಂಗಳ ಅವಧಿಗೆ ಸೀಮಿತವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯನ್ನು ರಚಿಸಲಾಗಿತ್ತು. ದಿನಾಂಕ: 11-01-2021ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020 ಜಾರಿಗೆ ಬಂದಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020(2020ರ ಕರ್ನಾಟಕ ಅಧಿನಿಯಮ 53)ರ ನಿಯಮ 7ನೇ ಪ್ರಕರಣದ (3)ನೇ ಉಪ ಪ್ರಕರಣದ ಖಂಡ (ಎ)ರ ಪರಂತುದನ್ವಯ ಅಧಿಕಾರವನ್ನು ಚಲಾಯಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪ್ರದೇಶಕ್ಕೆ ಸಂಬಂಧಿಸಿದಂತೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಲು 06 (ಆರು) ತಿಂಗಳ ಅವಧಿಗೆ ಸೀಮಿತವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯನ್ನು ರಚಿಸಲಾಗಿರುತ್ತದೆ.

		ಮುಖ್ಯ ಆಯುಕ್ತರು ಹಾಗೂ ಅಧ್ಯಕ್ಷರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿ ಇವರು ದಿನಾಂಕ:25-08-2021 ರ ಪತ್ರದಲ್ಲಿ, ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸೋಂಕು ತಡೆಗಟ್ಟುವ ನಿಟ್ಟಿನಲ್ಲಿ ಉಪಕ್ರಮಗಳನ್ನು ಕೈಗೊಳ್ಳುವಲ್ಲಿ ಕಾರ್ಯ ಪ್ರವೃತ್ತರಾಗಿದ್ದರ ಹಿನ್ನೆಲೆಯಲ್ಲಿ ಸಮಿತಿಗೆ ನಿಗಧಿಪಡಿಸಿದ ಅವಧಿಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಕಾರ್ಯವನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ, ಸಮಿತಿಯ ಅವಧಿಯನ್ನು ಇನ್ನೂ 06 ತಿಂಗಳ ಅವಧಿಗೆ ವಿಸ್ತರಿಸುವಂತೆ ಕೋರಿದ್ದು, ಸರ್ಕಾರವು ಅಧಿಸೂಚನೆ ಸಂಖ್ಯೆ:ನಅಇ 17 ಬಿಬಿಎಲ್ 2020 (ಭಾಗ-1)(ಇ), ದಿನಾಂಕ: 30-10-2021 ರಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯ ಅವಧಿಯನ್ನು ದಿನಾಂಕ:28-07-2021 ರಿಂದ ಜಾರಿಗೆ ಬರುವಂತೆ 06 ತಿಂಗಳ ಅವಧಿಗೆ ಮುಂದುವರೆಸಲಾಗಿತ್ತು. ಪ್ರಸ್ತುತ ಪಾಲಿಕೆಯ ಮುಖ್ಯ ಆಯುಕ್ತರು ಹಾಗೂ ಅಧ್ಯಕ್ಷರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿ ಇವರು ಕೋವಿಡ್-19 ವೈರಾಣು ಸೋಂಕು ತಡೆಗಟ್ಟುವ ಉಪ ಕ್ರಮಗಳನ್ನು ಕೈಗೊಳ್ಳುವಲ್ಲಿ ನಿರಂತರವಾಗಿ ಕಾರ್ಯಪ್ರವೃತ್ತರಾಗಿದ್ದರ ಹಿನ್ನೆಲೆಯಲ್ಲಿ ಸಮಿತಿಗೆ ನಿಗಧಿಪಡಿಸಿದ್ದ ಅವಧಿಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣಾ ಕಾರ್ಯವನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಸದರಿ ಸಮಿತಿಯ ಅವಧಿಯನ್ನು ಇನ್ನೂ ಎರಡು ತಿಂಗಳು (ಅವಧಿಗೆ) ವಿಸ್ತರಿಸುವಂತೆ ಕೋರಿದ್ದು, ವಿಷಯವು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.
ಆ	ವಾರ್ಡ್ ಪುನರ್ ವಿಂಗಡಣೆ ಮಾಡಲು ಸಮಿತಿಗೆ ಯಾವ ಕಾನೂನು/ನಿಯಮಗಳ ಅಡಿಯಲ್ಲಿ ಅವಕಾಶವಿರುತ್ತದೆ;	ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 (1977 ರ ಕರ್ನಾಟಕ ಅಧಿನಿಯಮ 14)ರ 7ನೇ ಪ್ರಕರಣದ (1)ನೇ ಉಪಪ್ರಕರಣದ ಖಂಡ (ಎ)ರ ಪರಂತುದನ್ವಯ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020 (2020 ರ ಕರ್ನಾಟಕ ಅಧಿನಿಯಮ 53)ರ 7ನೇ ಪ್ರಕರಣದ (3)ನೇ ಉಪಪ್ರಕರಣದ ಖಂಡ (ಎ)ರ ಪರಂತುದನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್‌ಗಳ ಪುನರ್ ವಿಂಗಡಣೆಯನ್ನು ಮಾಡಲು ಅವಕಾಶವಿರುತ್ತದೆ.
ಇ	ವಾರ್ಡ್ ಪುನರ್ ವಿಂಗಡಣೆ ಮಾಡಲು ಸಮಿತಿಗೆ ಯಾವ ಮಾನದಂಡಗಳು ಅನ್ವಯಿಸುತ್ತದೆ;	
ಈ	ವಾರ್ಡ್ ಪುನರ್ ವಿಂಗಡಣೆ ಮಾಡುವ ಸಮಿತಿ ಮೇಲೆ ರಾಜಕೀಯ ವ್ಯಕ್ತಿಗಳು ಹಾಗೂ ಇತರೆ ಸಂಸ್ಥೆಗಳಿಂದ ಒತ್ತಡ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು);	ಬಂದಿರುವುದಿಲ್ಲ.

ಛ	ವಾರ್ಡ್ ಪುನರ್ ವಿಂಗಡಣೆ ಕರಡು ಅಧಿಸೂಚನೆ ಸಾರ್ವಜನಿಕರ ಮುಂದೆ ಯಾವ ದಿನಾಂಕದಂದು ಪ್ರಕಟಗೊಳ್ಳುತ್ತದೆ;	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪ್ರದೇಶಕ್ಕೆ ಸಂಬಂಧಿಸಿದಂತೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ಮಾಡಲು ರಚಿಸಿರುವ ವಾರ್ಡ್‌ಗಳ ಪುನರ್ ವಿಂಗಡಣಾ ಸಮಿತಿಯು ಕಾಲಾವಕಾಶವನ್ನು ಕೋರಿದ್ದು, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ ನಂತರ ನಿಯಮಾನುಸಾರ ಪರಿಶೀಲಿಸಿ, ವಾರ್ಡ್‌ಗಳ ಪುನರ್ ವಿಂಗಡಣಾ ಕರಡು ಅಧಿಸೂಚನೆಯನ್ನು ಪ್ರಕಟಿಸುವ ಬಗ್ಗೆ ಕ್ರಮವಹಿಸಲಾಗುವುದು.
ಊ	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ನಡೆಸದೇ ಒಂದುವರೆ ವರ್ಷಗಳಾದರೂ ಆಡಳಿತದಾರರನ್ನು ನೇಮಿಸಲು ಸರ್ಕಾರಕ್ಕೆ ಯಾವ ಸಂವಿಧಾನ ಅನುಚ್ಛೇದದಲ್ಲಿ ಅಥವಾ ಕೆ.ಎಂ.ಸಿ. ಕಾಯ್ದೆ 1976/ಬಿ.ಬಿ.ಎಂ ಕಾಯ್ದೆ 20:20 ರಲ್ಲಿ ಅವಕಾಶವಿದೆಂಬುದರ ಬಗ್ಗೆ ಸ್ಪಷ್ಟಣೆ ನೀಡುವುದು? (ವಿವರಿಸುವುದು)	ಕರ್ನಾಟಕ ಮುನ್ಸಿಪಲ್ ಕಾಯ್ದೆ 1976 ರ ಕಲಂ 509 ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: **E-DPAR 458 SAS 2020,** ದಿನಾಂಕ: 10-09-2020ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿರುತ್ತದೆ. ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ 2020 ದಿನಾಂಕ: 11.01.2021ರಂದು ಜಾರಿಗೆ ಬಂದಿದ್ದು, ಕಲಂ 127 ರಲ್ಲಿ ಬಿ.ಬಿ.ಎಂ.ಪಿ.ಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲು/ಅವಧಿಯನ್ನು ವಿಸ್ತರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಚುನಾಯಿತರಾದ ಸದಸ್ಯರ ಪ್ರಥಮ ಸಭೆಯು ದಿನಾಂಕ: 11-09-2015ರಂದು ನಡೆದಿದ್ದು, ಮಹಾನಗರ ಪಾಲಿಕೆಯ ಚುನಾಯಿತ ಸದಸ್ಯರುಗಳ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯಗೊಂಡಿದ್ದು, **Covid-19** ಸಾಂಕ್ರಾಮಿಕ ರೋಗವು ಜಾಗತಿಕವಾಗಿ ವ್ಯಾಪಿಸಿದ್ದರ ಹಿನ್ನೆಲೆಯಲ್ಲಿ ಮಾರ್ಚ್-2020 ರಿಂದ ಮೇ-2020 ಲಾಕ್‌ಡೌನ್ ಜಾರಿಯಲ್ಲಿದ್ದುದರಿಂದ ಬಿ.ಬಿ.ಎಂ.ಪಿ.ಯ ವಾರ್ಡ್‌ಗಳ ಮರುವಿಂಗಡಣೆಯನ್ನು ಮಾಡಿ, ರಾಜ್ಯ ಚುನಾವಣಾ ಆಯೋಗವು ಚುನಾವಣೆಯನ್ನು ನಡೆಸುವ ಸಲುವಾಗಿ ಬಿ.ಬಿ.ಎಂ.ಪಿ.ಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಯನ್ನು ಪರಿಷ್ಕರಿಸಿ, ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಬೇಕಾಗಿರುವುದರಿಂದ ಹಾಗೂ ವಾರ್ಡ್‌ಗಳ ವಿಂಗಡಣೆಯ ಅನುಸಾರ ಸದಸ್ಯರುಗಳ ಮೀಸಲಾತಿಯನ್ನು ಸರ್ಕಾರವು ನಿಗಧಿಪಡಿಸಿದ ನಂತರ ಚುನಾವಣೆಯನ್ನು ನಡೆಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣೆ ಮಾಡಲು ಪಾಲಿಕೆಯ ಮುಖ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ವಾರ್ಡ್‌ಗಳ ಪುನರ್ ವಿಂಗಡಣೆಯ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯು ಕೋವಿಡ್-19 ರ ಹಿನ್ನೆಲೆಯಲ್ಲಿ ದಿನಾಂಕ: 28-01-2021ರಿಂದ ಜಾರಿಗೆ ಬರುವಂತೆ ಇನ್ನು ಎರಡು ತಿಂಗಳ ಅವಧಿಯನ್ನು ವಿಸ್ತರಿಸುವಂತೆ ಕೋರಿದ್ದು, ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ನಅಇ **19** ಬಿಬಿಎಸ್ **2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.